## ಕರ್ನಾಟಕ ಸರ್ಕಾರದ ನಡವಳಿಗಳು

**ವಿಷಯ:** ಶ್ರೀ ಕೆ. ಅಶ್ವತ್ಥರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ದಕ್ಷಿಣ ತಾಲ್ಲೂಕು ಇವರ ಅಮಾನತ್ತು ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ, 1958ರ ನಿಯಮ 100(3)ರನ್ವಯ ಕರ್ತವ್ಯದ ಅವಧಿಯೆಂದು ಪರಿಗಣಿಸುವ ಬಗ್ಗೆ.

**ಓದಲಾಗಿದೆ:-**

1) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 20 ವಿಸೇಬಿ 2010, ದಿನಾಂಕ: 04.03.2010.
2) ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 26 ವಿಸೇಬಿ 2010, ದಿನಾಂಕ: 15.11.2010.
3) ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ದಾಖಲಿಸಿದ್ದ ಎಸ್.ಎಲ್.ಪಿ (ಕ್ರಿಮಿನಲ್) ಸಂಖ್ಯೆ: 9698/2013ರಲ್ಲಿ ದಿನಾಂಕ: 24.07.2014ರಂದು ನೀಡಿರುವ ಆದೇಶ.
4) ಶ್ರೀ ಅಶ್ವತ್ಥರೆಡ್ಡಿ ಇವರ ಮನವಿ ದಿನಾಂಕ: 28.06.2021.

*****

**ಪ್ರಸ್ತಾವನೆ:**

ಶ್ರೀ ಕೆ. ಅಶ್ವತ್ಥರೆಡ್ಡಿ ಇವರು ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿಯ ಕಾರ್ಯನಿರ್ವಾಹಕ ಅಧಿಕಾರಿಯಾಗಿ ಕರ್ತವ್ಯ ನಿರ್ವಹಿಸುತ್ತಿದ್ದ ಅವಧಿಯಲ್ಲಿ ಬೆಂಗಳೂರು ದಕ್ಷಿಣ ತಾಲ್ಲೂಕು ಪಂಚಾಯಿತಿ ವ್ಯಾಪ್ತಿಗೆ ಬರುವ ಚುಂಚನಕುಪ್ಪೆ ಮತ್ತು ಕೆ. ಗೊಲ್ಲಹಳ್ಳಿ ಗ್ರಾಮ ಪಂಚಾಯಿತಿಗಳ ವ್ಯಾಪ್ತಿಯಲ್ಲಿ ರಾಷ್ಟ್ರೀಯ ಉದ್ಯೋಗ ಖಾತರಿ ಯೋಜನೆಯ ಅನುಷ್ಠಾನಕ್ಕೆ ಸಂಬಂಧಿಸಿದಂತೆ ಭ್ರಷ್ಟಾಚಾರವೆಸಗಿರುತ್ತಾರೆಂಬ ಆರೋಪದ ಮೇರೆಗೆ ಬೆಂಗಳೂರು ನಗರ ಲೋಕಾಯುಕ್ತ ಪೋಲಿಸ್ ನಿರೀಕ್ಷಕರು ಲಂಚ ನಿರೋಧಕ ಕಾಯ್ದೆಯನ್ವಯ ಮೊಕದ್ದಮೆ ಸಂಖ್ಯೆ: 2/2010ನ್ನು ದಾಖಲಿಸಿಕೊಂಡು ತನಿಖೆ ನಡೆಸಿ ಸರ್ಕಾರಕ್ಕೆ ಸಲ್ಲಿಸಿದ್ದ ಪ್ರಾಥಮಿಕ ವರದಿಯಲ್ಲಿ ಸದರಿಯವರ ವಿರುದ್ಧದ ಆರೋಪಗಳು ಮೇಲ್ನೋಟಕ್ಕೆ ಸಾಬೀತಾಗಿರುವುದು ಕಂಡು ಬಂದಿದ್ದ ಹಿನ್ನೆಲೆಯಲ್ಲಿ, ಇವರು ವಿರುದ್ಧದ ಕ್ರಿಮಿನಲ್ ಮೊಕದ್ದಮೆ/ ಇಲಾಖಾ ವಿಚಾರಣೆಯನ್ನು ಬಾಕಿ ಇರಿಸಿ ಮೇಲೆ ಕ್ರಮ ಸಂಖ್ಯೆ (1)ರಲ್ಲಿ ಓದಲಾದ ಸರ್ಕಾರದ ಆದೇಶದಲ್ಲಿ ಸದರಿಯವರನ್ನು ದಿನಾಂಕ: 04.03.2010ರಿಂದ ಜಾರಿಗೆ ಬರುವಂತೆ ಸೇವೆಯಿಂದ ಅಮಾನತ್ತುಗೊಳಿಸಿ ಆದೇಶಿಸಲಾಗಿತ್ತು.

ಮೇಲೆ ಕ್ರ.ಸಂ (2)ರಲ್ಲಿ ಓದಲಾದ ಆದೇಶದಲ್ಲಿ, ಶ್ರೀ ಕೆ. ಅಶ್ವತ್ಥರೆಡ್ಡಿ ಇವರ ವಿರುದ್ಧದ ಇಲಾಖಾ ವಿಚಾರಣೆ/ ಕ್ರಿಮಿನಲ್ ಮೊಕದ್ದಮೆಯನ್ನು ಕಾಯ್ದಿರಿಸಿ ಅಮಾನತ್ತನ್ನು ತೆರವುಗೊಳಿಸಿ ಸೇವೆಗೆ ಪುನರ್ ಸ್ಥಾಪಿಸಿ ರಾಮನಗರ ಜಿಲ್ಲಾ ಪಂಚಾಯಿತಿಯ ಸಹಾಯಕ ಕಾರ್ಯದರ್ಶಿ ಹುದ್ದೆಗೆ ಸ್ಥಳ ನಿಯುಕ್ತಿಗೊಳಿಸಿ ಆದೇಶಿಸಲಾಗಿತ್ತು. ಅದರನ್ವಯ ದಿನಾಂಕ: 19.11.2010ರಂದು ಸದರಿ ಹುದ್ದೆಯ ಕರ್ತವ್ಯಕ್ಕೆ ವರದಿ ಮಾಡಿಕೊಂಡಿರುತ್ತಾರೆ.

ಸದರಿ ಭ್ರಷ್ಟಾಚಾರದ ಆರೋಪಕ್ಕೆ ಸಂಬಂಧಿಸಿದಂತೆ ಶ್ರೀ ಕೆ. ಅಶ್ವತ್ಥರೆಡ್ಡಿ ಇವರ ವಿರುದ್ಧ ದಾಖಲಾಗಿದ್ದ ಕ್ರಿಮಿನಲ್ ಮೊಕದ್ದಮೆ ಸಂಖ್ಯೆ: 2/2010ರ ನಡವಳಿ ವಿರುದ್ಧ ಸದರಿಯವರು ಮಾನ್ಯ ಲೋಕಾಯುಕ್ತ ಪೋಲಿಸ್‌ರವರ ವಿರುದ್ಧ ಕರ್ನಾಟಕ ಉಚ್ಛ ನ್ಯಾಯಾಲಯದಲ್ಲಿ ಕ್ರಿಮಿನಲ್ ಅರ್ಜಿ ಸಂಖ್ಯೆ: 1001/2013ನ್ನು ದಾಖಲಿಸಿದ್ದರು. ಸದರಿ ಅರ್ಜಿಯಲ್ಲಿ, ಹೆಚ್ಚುವರಿ ಸಿಟಿ ಸಿವಿಲ್ ಮತ್ತು ಸೆಷನ್ ಜಡ್ಜ್ ನ್ಯಾಯಾಲಯದಲ್ಲಿ,

ಶ್ರೀ ಕೆ. ಅಶ್ವತ್ಥರೆಡ್ಡಿ ಇವರ ವಿರುದ್ಧ ದಾಖಲಾಗಿದ್ದ ಮೊಕದ್ದಮೆ ಸಂಖ್ಯೆ: 2/2010ರ ನಡವಳಿಯನ್ನು ವಜಾಗೊಳಿಸಿ ದಿನಾಂಕ: 09.04.2013ರಂದು ಆದೇಶಿಸಿರುತ್ತದೆ.

ಮಾನ್ಯ ಉಚ್ಛ ನ್ಯಾಯಾಲಯದ ದಿನಾಂಕ: 09.04.2013ರ ಆದೇಶವನ್ನು ಪ್ರಶ್ನಿಸಿ ಲೋಕಾಯುಕ್ತ ಸಂಸ್ಥೆಯು ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ಎಸ್.ಎಲ್.ಪಿ (ಕ್ರಿಮಿನಲ್) ಸಂಖ್ಯೆ: 9698/2013ನ್ನು ದಾಖಲಿಸಿದ್ದು, ಸದರಿ ಮೇಲ್ಮನವಿಯ ವಿಚಾರಣೆ ನಡೆಸಿ ಮಾನ್ಯ ಸರ್ವೋಚ್ಛ ನ್ಯಾಯಾಲಯವು ಮೇಲೆ ಕ್ರ.ಸಂ (3)ರಲ್ಲಿ ಓದಲಾದ ದಿನಾಂಕ: 24.07.2014ರ ಆದೇಶದಲ್ಲಿ ಸದರಿ ಮೇಲ್ಮನವಿಯನ್ನು ವಜಾಗೊಳಿಸಿರುತ್ತದೆ. ಈ ಆದೇಶದ ಮೇರೆಗೆ ಶ್ರೀ ಕೆ. ಅಶ್ವತ್ಥರೆಡ್ಡಿ, ಇವರ ವಿರುದ್ಧದ ಕ್ರಿಮಿನಲ್ ಪ್ರಕರಣವನ್ನು ಮುಕ್ತಾಯಗೊಳಿಸಲಾಗಿರುತ್ತದೆ.

ಶ್ರೀ ಕೆ. ಅಶ್ವತ್ಥರೆಡ್ಡಿ, ನಿವೃತ್ತ ಕಾರ್ಯನಿರ್ವಾಹಕ ಅಧಿಕಾರಿ ಇವರು ಮೇಲೆ ಕ್ರ.ಸಂ (4)ರಲ್ಲಿ ಓದಲಾದ ಮನವಿಯನ್ನು ಸಲ್ಲಿಸಿ, ತಮ್ಮ ವಿರುದ್ಧದ ಪ್ರಕರಣದಲ್ಲಿ ಆರೋಪಮುಕ್ತರಾಗಿರುವುದರಿಂದ ಅಮಾನತ್ತಿನಲ್ಲಿದ್ದ ದಿನಾಂಕ: 03.06.2010 ರಿಂದ 18.11.2010ರವರೆಗಿನ ಅವಧಿಯನ್ನು ಕರ್ತವ್ಯದ ಅವಧಿಯೆಂದು ಪರಿಗಣಿಸುವಂತೆ ಕೋರಿರುತ್ತಾರೆ.

ಸರ್ಕಾರವು ಶ್ರೀ ಕೆ. ಅಶ್ವತ್ಥರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ದಕ್ಷಿಣ ತಾಲ್ಲೂಕು ಇವರ ಮನವಿಯನ್ನು ಕೂಲಂಕಷವಾಗಿ ಪರಿಶೀಲಿಸಿದೆ. ಸದರಿ ಆಪಾದಿತ ಅಧಿಕಾರಿಯನ್ನು ಸೇವೆಯಿಂದ ಅಮಾನತ್ತುಗೊಳಿಸಲಾಗಿದ್ದ ಪ್ರಕರಣಕ್ಕೆ ಸಂಬಂಧಿಸಿದಂತೆ ಲೋಕಾಯುಕ್ತ ಸಂಸ್ಥೆಯಿಂದ ಮಾನ್ಯ ಸರ್ವೋಚ್ಛ ನ್ಯಾಯಾಲಯದಲ್ಲಿ ದಾಖಲಿಸಲಾಗಿದ್ದ ಕ್ರಿಮಿನಲ್ ಮೇಲ್ಮನವಿ ಪ್ರಕರಣವನ್ನು ವಜಾಗೊಳಿಸಿ ಆದೇಶಿಸಿರುವ ಹಿನ್ನೆಲೆಯಲ್ಲಿ ಸದರಿಯವರು ಅಮಾನತ್ತಿನಲ್ಲಿದ್ದ ದಿನಾಂಕ: 04.03.2010 ರಿಂದ 18.11.2010ವರೆಗಿನ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿ, 1958ರ ನಿಯಮ 100(3)ರ ಅನ್ವಯ ಕರ್ತವ್ಯದ ಅವಧಿಯೆಂದು ಪರಿಗಣಿಸಲು ಸರ್ಕಾರವು ನಿರ್ಧರಿಸಿ ಈ ಕೆಳಕಂಡಂತೆ ಆದೇಶಿಸಿದೆ.

**<u>ಸರ್ಕಾರದ ಆದೇಶ ಸಂಖ್ಯೆ: ಗ್ರಾಅಪ 137 ವಿಸೇಬಿ 2021, ಬೆಂಗಳೂರು, ದಿನಾಂಕ: 30.04.2022.</u>**

ಪ್ರಸ್ತಾವನೆಯಲ್ಲಿ ವಿವರಿಸಿರುವ ಅಂಶಗಳ ಹಿನ್ನೆಲೆಯಲ್ಲಿ, ಶ್ರೀ ಕೆ ಅಶ್ವತ್ಥರೆಡ್ಡಿ, ಹಿಂದಿನ ಕಾರ್ಯನಿರ್ವಾಹಕ ಅಧಿಕಾರಿ, ಬೆಂಗಳೂರು ದಕ್ಷಿಣ ತಾಲ್ಲೂಕು, ಬೆಂಗಳೂರು ನಗರ ಜಿಲ್ಲೆ (ಪ್ರಸ್ತುತ ನಿವೃತ್ತ) ಇವರು ದಿನಾಂಕ: 04.03.2010 ರಿಂದ 18.11.2010ವರೆಗೆ ಅಮಾನತ್ತಿನಲ್ಲಿ ಕಳೆದ ಅವಧಿಯನ್ನು ಕರ್ನಾಟಕ ನಾಗರೀಕ ಸೇವಾ ನಿಯಮಾವಳಿಗಳ ನಿಯಮ-100(3)ರ ಅನ್ವಯ **ಕರ್ತವ್ಯದ ಅವಧಿಯೆಂದು** ಪರಿಗಣಿಸಿ ಆದೇಶಿಸಿದೆ.

ಕರ್ನಾಟಕ ರಾಜ್ಯಪಾಲರ ಆದೇಶಾನುಸಾರ
ಮತ್ತು ಅವರ ಹೆಸರಿನಲ್ಲಿ,

30/04/2022
**(ಬಾಲಪ್ಪ)**
ಸರ್ಕಾರದ ಅಧೀನ ಕಾರ್ಯದರ್ಶಿ (ಸೇ-ಬಿ&ಸಿ)
ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.

30/4/2022

**ಇವರಿಗೆ:**

1) ಮಹಾಲೇಖಪಾಲರು (ಎ ಮತ್ತು ಇ), ಕರ್ನಾಟಕ, ಬೆಂಗಳೂರು.

2) ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತ್, ಬೆಂಗಳೂರು ನಗರ ಜಿಲ್ಲೆ.
3) ಆಪಾದಿತ ಅಧಿಕಾರಿಗೆ (ಮುಖ್ಯ ಕಾರ್ಯನಿರ್ವಾಹಕ ಅಧಿಕಾರಿ, ಜಿಲ್ಲಾ ಪಂಚಾಯತಿ, ಬೆಂಗಳೂರು ನಗರ ಜಿಲ್ಲೆ ಇವರ ಮುಖಾಂತರ).
4) ಮೇಲ್ವಿಚಾರಕರು, ಗಣಕ ಕೋಶ, ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ.
5) ಮಾಹಿತಿ ಕೇಂದ್ರ/ ಶಾಖಾ ರಕ್ಷಕ ಕಡತ/ ಹೆಚ್ಚುವರಿ ಪ್ರತಿ.

ಪ್ರತಿ:
ಸರ್ಕಾರದ ಅಪರ ಮುಖ್ಯ ಕಾರ್ಯದರ್ಶಿ/ ಉಪ ಕಾರ್ಯದರ್ಶಿ (ಆಡಳಿತ-2), ಗ್ರಾಮೀಣಾಭಿವೃದ್ಧಿ ಮತ್ತು ಪಂಚಾಯತ್ ರಾಜ್ ಇಲಾಖೆ ಇವರ ಆಪ್ತ ಕಾರ್ಯದರ್ಶಿ/ ಆಪ್ತ ಸಹಾಯಕರುಗಳಿಗೆ.

*****